ದೂರವಾಣಿ/ಫ್ಯಾಕ್ಸ್ : 080-2793 4470
URL : www.hoskote-pa.in

# ಹೊಸಕೋಟೆ ಯೋಜನಾ ಪ್ರಾಧಿಕಾರ

ಮಿಷನ್ ಹಾಸ್ಪಿಟಲ್ ರಸ್ತೆ, 1ನೇ ಅಡ್ಡರಸ್ತೆ, ಶ್ರೀ ವೆಂಕಟಾದ್ರಿ ಬಡಾವಣೆ, ಹೊಸಕೋಟೆ – 562114, ಬೆಂಗಳೂರು (ಗ್ರಾ) ಜಿಲ್ಲೆ.

ಸಂಖ್ಯೆ :ಹೊಯೋಪ್ರಾ/ಸಿ.ಸಿ./194/2014–15

ದಿನಾಂಕ: 11.05.2015

## ಪ್ರಾರಂಭಿಕ ಪ್ರಮಾಣ ಪತ್ರ

ವಿಷಯ : ಹೊಸಕೋಟೆ ತಾಲ್ಲೂಕು, ಕಸಬಾ ಹೋಬಳಿ, ಕೊರಳೂರು ಗ್ರಾಮದ ಸನಂ. ಸ.ನಂ. 216 ರ ಪೈಕಿ 29 ಗುಂಟೆ ಮತ್ತು ಸ.ನಂ. 223 ರ ಪೈಕಿ 26 1/2 ಗುಂಟೆ (ಹಳೆ ಸ. ನಂ. 42 ರಲ್ಲಿ) ಒಟ್ಟು 01 ಎಕರೆ 15 1/2 ಗುಂಟೆ (03 ಗುಂಟೆ 'ಬಿ' ಖರಾಬು ಹೊರತುಪಡಿಸಿದೆ) ವಿಸ್ತೀರ್ಣದ ಜಮೀನಿಗೆ ಅನುಮೋದನೆಯಾದ ವಸತಿ ಉದ್ದೇಶದ ಏಕ ನಕ್ಷೆಯಲ್ಲಿನ ಕಟ್ಟಡ ನಕ್ಷೆಗೆ ಬೇಸ್‌ಮೆಂಟ್, ಸ್ಟಿಲ್ಟ್ ಮತ್ತು ಹದಿಮೂರು ಅಂತಸ್ತುಗಳ ವಸತಿ ಕಟ್ಟಡ ನಕ್ಷೆಗೆ (ವಸತಿ ಸಮುಚ್ಚಯ) ಅನುಮೋದನೆಯನ್ನು ನೀಡುವ ಬಗ್ಗೆ.

ಉಲ್ಲೇಖ: 1. ಈ ಕಛೇರಿಯ ವಸತಿ ಉದ್ದೇಶದ ಏಕ ನಿವೇಶನಾ ನಕ್ಷೆ ಅನುಮೋದನೆ ಸಂಖ್ಯೆ: ಹೊಯೋಪ್ರಾ/ಎಲ್.ಎ.ಒ./11/2014–15, ದಿನಾಂಕ: 10.11.2014.
2. ಸಮೇತನಹಳ್ಳಿ ಗ್ರಾಮ ಪಂಚಾಯಿತಿ ರವರ ಪತ್ರ ಸಂಖ್ಯೆ: ಸ.ಗ್ರಾ.ಪಂ/21/2014–15, ದಿನಾಂಕ: 27.11.2014.
3. ಪ್ರಾಧಿಕಾರಕ್ಕೆ ಶುಲ್ಕ ಪಾವತಿಸಿದ ಬಗ್ಗೆ ದಿನಾಂಕ: 11.05.2015, ಡಿ. ಡಿ. ನಂ. 399667, ರೂ. 8,14,200/–

**ಪ್ರಸ್ತಾವನೆ**

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಂತೆ ಪ್ರಾಧಿಕಾರದಿಂದ ಅನುಮೋದಿಸಿದ ವಸತಿ ಉದ್ದೇಶದ ಏಕ ನಕ್ಷೆಯಲ್ಲಿನ ಉಲ್ಲೇಖ (2) ರಲ್ಲಿ ಪ್ರಸ್ತಾಪಿತ ವಸತಿ ಕಟ್ಟಡ ನಕ್ಷೆಗೆ (ವಸತಿ ಸಮುಚ್ಚಯ) ಅನುಮೋದನೆ ಕೋರಿ ಸಲ್ಲಿಸಲಾದ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಉಲ್ಲೇಖ (3) ರಂತೆ ಸಂಬಂಧಿಸಿದ ಶುಲ್ಕವನ್ನು ಅರ್ಜಿದಾರರು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಸದರಿ ವಸತಿ ಕಟ್ಟಡವು ಬೇಸ್‌ಮೆಂಟ್, ಸ್ಟಿಲ್ಟ್ ಮತ್ತು ಹದಿಮೂರು (Basement+Stilt+13 Floors) ಅಂತಸ್ತುಗಳನ್ನು ಹೊಂದಿದ್ದು, ಒಟ್ಟು 39.96 ಮೀ. ಎತ್ತರವಿದ್ದು, ಒಟ್ಟು 104 ವಸತಿ ಘಟಕಗಳನ್ನು ಕಟ್ಟಲು ಪ್ರಸ್ತಾವಿಸಲಾಗಿದೆ. ಸಲ್ಲಿಸಲಾದ ಕಟ್ಟಡ ನಕ್ಷೆಗಳು ಅನುಮೋದಿತ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುತ್ತದೆ. ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ: 9800/2015 (LB-RES) ರ ದಿನಾಂಕ: 01.04.2015 ರ ಆದೇಶದಂತೆ ಮತ್ತು ದಿನಾಂಕ: 17.04.2015 ರ ಪ್ರಾಧಿಕಾರದ ಸಭೆಯ ನಡಾವಳಿಗಳ ವಿಷಯ ಸಂಖ್ಯೆ: 46/1 ರಂತೆ ಸರ್ಕಾರದ ದಿನಾಂಕ: 30.01.2015 ರ ಅಧಿಸೂಚನೆಯನ್ನು ಪರಿಗಣಿಸಿರುವುದಿಲ್ಲ.

ಆದ್ದರಿಂದ, ಮೇಲೆ ವಿವರಿಸಿರುವ ಅಂಶಗಳ ಮೇರೆಗೆ ವಸತಿ ಕಟ್ಟಡ ನಕ್ಷೆಗೆ (ವಸತಿ ಸಮುಚ್ಚಯ) ತಾಂತ್ರಿಕ ಅನುಮೋದನೆ ನೀಡುವ ಸಂಬಂಧ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

### ಆದೇಶ ಸಂಖ್ಯೆ: ಹೊಯೋಪ್ರಾ/ಸಿ.ಸಿ./194/2014–15, ದಿನಾಂಕ : 11.05.2015

ಹೊಸಕೋಟೆ ತಾಲ್ಲೂಕು, ಕಸಬಾ ಹೋಬಳಿ, ಕೊರಳೂರು ಗ್ರಾಮದ ಸನಂ. ಸ.ನಂ. 216 ರ ಪೈಕಿ 29 ಗುಂಟೆ ಮತ್ತು ಸ.ನಂ. 223 ರ ಪೈಕಿ 26 1/2 ಗುಂಟೆ (ಹಳೆ ಸ. ನಂ. 42 ರಲ್ಲಿ) ಒಟ್ಟು 01 ಎಕರೆ 15 1/2 ಗುಂಟೆ (03 ಗುಂಟೆ 'ಬಿ' ಖರಾಬು ಹೊರತುಪಡಿಸಿದೆ) ವಿಸ್ತೀರ್ಣದ ಜಮೀನಿಗೆ ಉಲ್ಲೇಖ (1) ರಂತೆ ಅನುಮೋದನೆಯಾದ ವಸತಿ ಉದ್ದೇಶದ ಏಕ ನಿವೇಶನ ನಕ್ಷೆಯಲ್ಲಿನ ಕಟ್ಟಡ ನಕ್ಷೆಯಲ್ಲಿ ಬೇಸ್‌ಮೆಂಟ್, ಸ್ಟಿಲ್ಟ್ ಮತ್ತು ಹದಿಮೂರು ಅಂತಸ್ತುಗಳ ಒಟ್ಟು 104 ವಸತಿ ಘಟಕಗಳನ್ನೊಳಗೊಂಡ ಕಟ್ಟಡ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 15 ರನ್ವಯ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಕಾರ್ಯರೂಪಕ್ಕೆ ತರಲು ತಾಂತ್ರಿಕ ಅನುಮೋದನೆ ನೀಡಲಾಗಿದೆ.

**ಷರತ್ತುಗಳು:**

1. ಈಗ ನೀಡಿರುವ ಕಟ್ಟಡ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ಕಟ್ಟಡ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳದಿದ್ದಲ್ಲಿ, ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.

2. ಅನುಮೋದಿತ ವಸತಿ ಅಭಿವೃದ್ಧಿ ನಕ್ಷೆಯಂತೆ ಪ್ರಸ್ತಾವಿಸಲಾದ ಕಟ್ಟಡ ನಕ್ಷೆಗಳಿಗೆ ಅನುಗುಣವಾಗಿ ಹಾಗೂ ಈ ಪ್ರಾಧಿಕಾರದಿಂದ ನೀಡಲಾದ ಅನುಮೋದನೆಯಂತೆ ಕಟ್ಟಡಗಳನ್ನು ನಿರ್ಮಿಸತಕ್ಕದ್ದು. ಕಟ್ಟಡ ಕಾಮಗಾರಿ ಪೂರ್ಣಗೊಂಡ ನಂತರ ಈ ಕಛೇರಿಗೆ ಮಾಹಿತಿ ನೀಡತಕ್ಕದ್ದು.
3. ಸದರಿ ಜಮೀನಿನಲ್ಲಿ ಪ್ರಸ್ತಾಪಿಸಿರುವ ಕಟ್ಟಡಗಳ ನಿರ್ಮಾಣ ಸಂಬಂಧ ದಿನಾಂಕ: 08.05.2015 ರಂದು ಸಲ್ಲಿಸಿರುವ ಸ್ಥಿರತೆ ಪ್ರಮಾಣ ಪತ್ರ (Structural Stability) ದಲ್ಲಿನ ನಿಯಮಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ನಿಯಮಗಳಂತೆ ಕಟ್ಟಡಗಳನ್ನು ನಿರ್ಮಿಸತಕ್ಕದ್ದು ಹಾಗೂ ಸದರಿ ಕಟ್ಟಡದ ಗುಣಮಟ್ಟಕ್ಕೆ ಅರ್ಜಿದಾರರು/ಅಭಿವೃದ್ಧಿದಾರರೇ ಹೊಣೆಗಾರರಾಗಿರುತ್ತಾರೆ.
4. ನಿವೇಶನದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಾದ ಸಮೇತನಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ಪರವಾನಗಿ ಪಡೆಯತಕ್ಕದ್ದು.
5. ಸದರಿ ಜಮೀನಿನಲ್ಲಿ ವಸತಿ ಕಟ್ಟಡ ಕಾಮಗಾರಿ ಕೈಗೊಳ್ಳುವ ಮೊದಲು ಮತ್ತು ನಂತರ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವರ ಪತ್ರ ಸಂಖ್ಯೆ: PCB/93/CNP/14/5754, ದಿನಾಂಕ: 25.02.2015 ರನ್ವಯ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕ್ಕದ್ದು.
6. ಸದರಿ ಯೋಜನೆಗೆ ಕುಡಿಯುವ ನೀರು ಪೂರೈಕೆ ಬಗ್ಗೆ ಸಮೇತನಹಳ್ಳಿ ಗ್ರಾಮ ಪಂಚಾಯಿತಿ, ಅನುಗೊಂಡನಹಳ್ಳಿ ಹೋಬಳಿ, ಹೊಸಕೋಟೆ ತಾಲ್ಲೂಕು (ಪತ್ರ ಸಂಖ್ಯೆ: ಸ.ಗ್ರಾ.ಪಂ/01/2014–15, ದಿನಾಂಕ: 26.04.2014 ರಂದು) ರವರು ನೀಡಿರುವ ಪತ್ರದಂತೆ ಅಗತ್ಯ ಕ್ರಮ ಜರುಗಿಸಿ ನೀರು ಪೂರೈಕೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳುವುದು ಹಾಗೂ ಇತರೆ ಮೂಲಗಳಿಂದಲೂ ನೀರು ಪೂರೈಕೆಗೆ ಕ್ರಮ ಜರುಗಿಸುವುದು.
7. ಸದರಿ ಜಮೀನಿನಲ್ಲಿ ಯಾವುದೇ ಕಾಮಗಾರಿ ಕೈಗೊಳ್ಳುವ ಮೊದಲು ಭಾರತ್ ಸಂಚಾರ ನಿಗಮ ಮಂಡಳಿಯವರ ಪತ್ರ ಸಂಖ್ಯೆ: DE/SAN/BG/S-11/VOL XVII/14, ದಿನಾಂಕ: 27.06.2014 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕದ್ದು.
8. ಸದರಿ ಜಮೀನಿನಲ್ಲಿ ಯಾವುದೇ ಕಾಮಗಾರಿ ಕೈಗೊಳ್ಳುವ ಮೊದಲು ಭಾರತೀಯ ವಿಮಾನಯಾನ ಪ್ರಾಧಿಕಾರದವರ ಪತ್ರ ಸಂಖ್ಯೆ: AAI/BIA/ATM/NOC/BANG/SOUTH/B/091914/64351/2839-43, ದಿನಾಂಕ: 09.01.2015 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕದ್ದು.
9. Director General of Police & Director General, Karnataka Fire & Emergency Services ರವರ ನಿರಾಕ್ಷೇಪಣಾ ಪತ್ರ ಸಂಖ್ಯೆ: ಜಿ.ಬಿ.ಸಿ(1)/66/2015, ದಿನಾಂಕ: 15.04.2015 ರಲ್ಲಿ ವಿಧಿಸಲಾದ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕ್ಕದ್ದು.
10. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ರವರ ಪತ್ರ ಸಂಖ್ಯೆ: EEE/YNKD/AEE(O)JE-2/14-15/2106, ದಿನಾಂಕ: 10.07.2014 ರಲ್ಲಿ ವಿಧಿಸಲಾದ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕ್ಕದ್ದು.
11. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಕಟ್ಟಡ ನಕ್ಷೆಗಳಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
12. ಈ ನಿವೇಶನದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಹಾಗೂ ಹೊಸ ಸಸ್ಯಗಳನ್ನು ಬೆಳೆಸುವುದು.
13. ಸೋಲಾರ್ ವಾಟರ್ ಹೀಟರ್ ಅನ್ನು ಕಟ್ಟಡಗಳಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.
14. ಸದರಿ ನಿವೇಶನದಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
15. ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಈ ಕೆಳಗಿನ ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.
16. ಕಟ್ಟಡದ ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ಬಳಸುವುದನ್ನು ನಿಷೇಧಿಸಲಾಗಿದೆ ಹಾಗೂ ಕಾರ್ಮಿಕ ಇಲಾಖೆಯ ಆದೇಶಾನುಸಾರ ವಿಧಿಸಿರುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು. ಮತ್ತು ಕಟ್ಟಡ ಕಾಮಗಾರಿ ನಿರ್ಮಾಣಗಾರರಿಗೆ ಕಟ್ಟಡ ಕಾಮಗಾರಿಯ ಸಂದರ್ಭದಲ್ಲಿ ಅಗತ್ಯ ಸೌಕರ್ಯಗಳನ್ನು ಒದಗಿಸತಕ್ಕದ್ದು.
17. ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆ, ಪಾದಚಾರಿ ಮಾರ್ಗಗಳಲ್ಲಿ ಶೇಖರಣೆ ಮಾಡಬಾರದು.
18. ಕಟ್ಟಡ ನಡು ಜಾಗ ಪ್ರದೇಶದ ಅಂಚಿನಲ್ಲಿ ಗಿಡ ಮರಗಳನ್ನು ಬೆಳೆಸತಕ್ಕದ್ದು.
19. ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.

ದೂರವಾಣಿ/ಫ್ಯಾಕ್ಸ್ : 080-2793 4470
URL : www.hoskote-pa.in

# ಹೊಸಕೋಟೆ ಯೋಜನಾ ಪ್ರಾಧಿಕಾರ

ಮಿಷನ್ ಹಾಸ್ಪಿಟಲ್ ರಸ್ತೆ, 1ನೇ ಅಡ್ಡರಸ್ತೆ, ಶ್ರೀ ವೆಂಕಟಾದ್ರಿ ಬಡಾವಣೆ, ಹೊಸಕೋಟೆ – 562114, ಬೆಂಗಳೂರು (ಗ್ರಾ) ಜಿಲ್ಲೆ.

ಸಂಖ್ಯೆ :ಹೊಯೋಪ್ರಾ/ಸಿ.ಸಿ./194/2014–15 ದಿನಾಂಕ: 11.05.2015

20. ಸದರಿ ಪ್ರಸ್ತಾಪಿತ ಜಮೀನಿನಲ್ಲಿ ಹೊಸಕೋಟೆ ಯೋಜನಾ ಪ್ರಾಧಿಕಾರ/ಇತರ ಸರ್ಕಾರಿ ಇಲಾಖೆಗಳ ಜಮೀನುಗಳು/ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಹಾಗೂ ಖರಾಬು ಜಮೀನುಗಳ ಅಳತೆಗಳು ಮತ್ತು ಅವುಗಳ ವಾಸ್ತವಿಕ ಸ್ಥಳಗಳ ವ್ಯತ್ಯಾಸ ಕಂಡುಬಂದಂತಹ ಸಂದರ್ಭದಲ್ಲಿ ಹೊಸಕೋಟೆ ಯೋಜನಾ ಪ್ರಾಧಿಕಾರವು ಅನುಮೋದಿತ ವಸತಿ ಉದ್ದೇಶದ ಏಕ ನಿವೇಶನ ನಕ್ಷೆಯನ್ನು/ಕಟ್ಟಡ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಸಂಪೂರ್ಣ ಅಧಿಕಾರ ಹೊಂದಿರುತ್ತದೆ.
21. ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.
22. ಸದರಿ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
23. ಅರ್ಜಿದಾರರು ಸಲ್ಲಿಸಿರುವ ದಾಖಲಾತಿಗಳನ್ವಯ ಈ ಅನುಮತಿಯನ್ನು ನೀಡಲಾಗಿದ್ದು, ವಸತಿ ಕಟ್ಟಡ ನಕ್ಷೆಗೆ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ಕಟ್ಟಡ ನಕ್ಷೆಗೆ ನೀಡಿರುವ ಅಂಗೀಕಾರ ತಾನಾಗಿಯೇ ರದ್ದುಗೊಳ್ಳುತ್ತದೆ.
24. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ವಿಧಿ 17 ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.
25. ಸದರಿ ಕಟ್ಟಡದಲ್ಲಿ ವಿಕಲಚೇತನ ಸ್ನೇಹಿ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದು.
26. ನೈಸರ್ಗಿಕವಾಗಿ ಹರಿಯುವ ನದಿ/ ಹಳ್ಳ /ಕೆರೆ ಮುಂತಾದವುಗಳಿಗೆ ಯಾವುದೇ ಮಲಿನ ನೀರನ್ನು ಬಿಡಬಾರದು.
27. ಶೌಚಕ್ಕೆ ಬಳಸುವ ತ್ಯಾಜ್ಯ ನೀರನ್ನು "ನಗರ ಮರುಬಳಕೆ ಮಾನದಂಡ" ದಂತೆ ಬಳಸುವುದು.
28. ಸಂಸ್ಕರಿತ ತ್ಯಾಜ್ಯ ನೀರನ್ನು ತೋಟಗಳಿಗೆ ಮತ್ತು ಶೌಚಕ್ಕೆ ಬಳಸುವುದು.
29. ಎಸ್.ಟಿ.ಪಿ. ಯಲ್ಲಿ ವಾಸನೆ ನಿಯಂತ್ರಿಸುವ ವ್ಯವಸ್ಥೆಯನ್ನು ಪರಿಗಣಿಸುವುದು.
30. ಕಟ್ಟಕ ನಿರ್ಮಿಸುವವರು ಆದಷ್ಟು ಕಡಿಮೆ ಹೊಗೆ ಹೊರಸೂಸುವ ಉತ್ತಮ ತಾಂತ್ರಿಕತೆಯನ್ನು ಬಳಸುವುದು.
31. ಸರ್ಕಾರದ ನಿರ್ದೇಶನದ ಮೇರೆಗೆ ಇನ್ನಾವುದೇ ಶುಲ್ಕಗಳನ್ನು ತುಂಬಲು ಪ್ರಾಧಿಕಾರವು ಸೂಚನೆ ನೀಡಿದಲ್ಲಿ ಅರ್ಜಿದಾರರು ಅಂತಹ ಶುಲ್ಕವನ್ನು ಪ್ರಾಧಿಕಾರಕ್ಕೆ ಪಾವತಿಸತಕ್ಕದ್ದು.
32. ಪ್ರಾಧಿಕಾರವು ವಿಧಿಸುವ ಇನ್ನಾವುದೇ ಷರತ್ತುಗಳಿಗೆ ಬದ್ಧವಾಗಿರತಕ್ಕದ್ದು.

BN. [signature]

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಹಾಗೂ ಸದಸ್ಯ ಕಾರ್ಯದರ್ಶಿ ಹೊಸಕೋಟೆ ಯೋಜನಾ ಪ್ರಾಧಿಕಾರ,
ಹೊಸಕೋಟೆ.

<u>ಪ್ರತಿಯನ್ನು :</u>

1. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು/ಕಾರ್ಯದರ್ಶಿಗಳು, ಸಮೇತನಹಳ್ಳಿ ಗ್ರಾಮಪಂಚಾಯಿತಿ, ಹೊಸಕೋಟೆ ತಾಲ್ಲೂಕು ಇವರಿಗೆ ಕಟ್ಟಡ ನಕ್ಷೆಯ ನಾಲ್ಕು ಪ್ರತಿಗಳೊಂದಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
2. ಶ್ರೀ ಕೆ.ಎಂ. ಕೃಷ್ಣಪ್ಪ ಮತ್ತು ಇತರರ ಪರವಾಗಿ ಜಿ.ಪಿ.ಎ. ದಾರರಾದ ಶ್ರೀ ಕೆ.ಎಸ್. ಗೌತಮ್ ನಾಯ್ಡು, ಸಿ.ಇ.ಓ., ಮೆ॥ ಜಿ.ಕೆ. ಶೆಲ್ಟರ್ಸ್ ಪ್ರೈ ಲಿ., ನಂ. 27, 4ನೇ ಮಹಡಿ, 9ನೇ ಮೈನ್, ಜಯನಗರ 3ನೇ ಬ್ಲಾಕ್, ಬೆಂಗಳೂರು–11 ಇವರಿಗೆ ಮಾಹಿತಿಗಾಗಿ.